ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 11/01/2020

## ರೈಲು ನಿಲ್ದಾಣದಲ್ಲಿ ಮಹಿಳಾ ಅಧಿಕಾರಿ ತಳ್ಳಿದ ಶಾಸಕ!

**ಆರಸೀಕೆರೆ:** ಪಟ್ಟಣದ ರೈಲು ನಿಲ್ದಾಣದಲ್ಲಿ ಕ್ಯಾಂಟೀನ್ ಉದ್ಘಾಟನೆ ಮತ್ತು ವಿವಿಧ ವಿಭಾಗಗಳ ಪರಿಶೀಲನೆ ವೇಳೆ ಶಾಸಕ ಕೆ.ಎಂ. ಶಿವಲಿಂಗೇಗೌಡ ತಮ್ಮ ಜತೆ ಅಸಭ್ಯವಾಗಿ ವರ್ತಿಸಿದ್ದಾಗಿ ಮೈಸೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕಿ ಅಪರ್ಣಾ ಗರ್ಗ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನೈಋತ್ಯ ರೈಲ್ವೆ ಪ್ರಧಾನ ವ್ಯವಸ್ಥಾಪಕ ಅಜಯ್‌ಕುಮಾರ್ ಸಿಂಗ್ ಶುಕ್ರವಾರ ಪರಿಶೀಲನೆಗಾಗಿ ಆಗಮಿಸಿದ್ದರು. ರೈಲ್ವೆ ಇಲಾಖೆಯಿಂದ ಅರಸೀಕೆರೆಗೆ ಸಿಗಬೇಕಿರುವ ವಿವಿಧ ಸೌಲಭ್ಯಗಳ ಕುರಿತು ಮನವಿ ಸಲ್ಲಿಸಲೆಂದು ಶಾಸಕರ ನೇತೃತ್ವದ ಸರ್ವ ಪಕ್ಷಗಳ ನಿಯೋಗ ನಿಲ್ದಾಣಕ್ಕೆ ಆಗಮಿಸಿತ್ತು.

» **ಶಿವಲಿಂಗೇಗೌಡ ವಿರುದ್ಧ ಆರೋಪ**

ಎಲ್ಲರೂ ಪ್ಲಾಟ್‌ಫಾರಂನಲ್ಲಿ ಸಾಗುತ್ತಿದ್ದಾಗ ಶಾಸಕರು ತಮ್ಮನ್ನು ಬೇಕೆಂದೇ ಜನಜಂಗುಳಿ ನಡುವೆ ತಳ್ಳಿದ್ದಾಗಿ ಅಪರ್ಣಾ ಗರ್ಗ್ ದೂರಿದ್ದಾರೆ. ಮಹಿಳಾ ಅಧಿಕಾರಿಗಳ ಜತೆ ಸರಿಯಾಗಿ ವರ್ತಿಸುವಂತೆ ಸಾರ್ವಜನಿಕವಾಗಿ ತಾಕೀತು ಮಾಡಿದರು. ಕೋಪೋದ್ರಿಕ್ತ ಅಧಿಕಾರಿಯ ಆರೋಪದಿಂದ ಮುಜುಗರಕ್ಕೀಡಾದ ಶಿವಲಿಂಗೇಗೌಡ, ತಾವು ದುರ್ನಡತೆ ತೋರಿಲ್ಲ. ಅಧಿಕಾರಿ ಅಪಾರ್ಥ ಮಾಡಿಕೊಂಡಿದ್ದಾರೆ ಎಂದು ಸಮರ್ಥಿಸಿಕೊಳ್ಳಲು ಯತ್ನಿಸಿದರು. ಹಿರಿಯ ಅಧಿಕಾರಿಗಳು ಎಲ್ಲರನ್ನೂ ಸಮಾಧಾನಗೊಳಿಸಿ ಪರಿಸ್ಥಿತಿ ತಿಳಿಗೊಳಿಸಿದರು.